ದಿನಾಂಕಃ **25.09.2025** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ ಶ್ರೀ ಡಿ ಎನ್ ಪಿ  ವಕೀಲರಿಂದಃ-

ರಂಗಸ್ವಾಮಿಯವರು ನನ್ನ ಮುತ್ತಜ್ಜ. ಅವರ ಹೆಂಡತಿ ಮುತ್ತಮ್ಮ. ಇಬ್ಬರೂ ಮರಣ ಹೊಂದಿರುತ್ತಾರೆ. ಅವರ ಮರಣ ಪ್ರಮಾಣಪತ್ರವನ್ನು ನಾನು ಹಾಜರುಪಡಿಸಿರುವುದಿಲ್ಲ. ಕರ್ಪುಮ್ಮ ಮತ್ತು ಚಿನ್ನಸ್ವಾಮಿ ಯವರು ನನ್ನ ಅಜ್ಜ ಅಜ್ಜಿ. ಅವರುಗಳ ಮರಣ ಪ್ರಮಾಣಪತ್ರವನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ನಾನು ಜನಿಸುವ ಪೂರ್ವದಲ್ಲೇ ಅವರು ಮರಣಹೊಂದಿರುತ್ತಾರೆ. ನಾನು ಜನಿಸುವ ಪೂರ್ವದಲ್ಲೇ ಅವರುಗಳು ಮರಣಹೊಂದಿರುವ ಕಾರಣ ಅವರ ಬಗ್ಗೆ ಸಂಪೂರ್ಣ ಮಾಹಿತಿ ನನಗೆ ಇಲ್ಲಾ ಎಂದರೆ ಸರಿಯಲ್ಲ. ಕಣ್ಣಮ್ಮ ಮತ್ತು ಚಿನ್ನಸ್ವಾಮಿ ನನ್ನ ತಂದೆ ತಾಯಿ. ಇವರುಗಳು ಮರಣ ಹೊಂದಿದ್ದು ಇವರ ಮರಣ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ಅವರು ಯಾವ ದಿನಾಂಕದಂದು ಮರಣ ಹೊಂದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನಗೆ 15 ವರ್ಷ ವಯಸ್ಸಾದಾಗ ಅವರು ಮರಣ ಹೊಂದಿರುತ್ತಾರೆ. ನನ್ನ ತಂದೆ ತಾಯಿ, ಅಜ್ಜ ಅಜ್ಜಿ, ಮುತ್ತಜ್ಜ ಮುತ್ತಜ್ಜಿ ಹೆಸರಿನಲ್ಲಿ ಆಸ್ತಿ ಇರುವ ದಾಖಲೆಗಳನ್ನು ನೋಡಿರುತ್ತೇನೆ. ಸದರಿ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನನ್ನ ತಂದೆ ತಾಯಿಗೆ ನಾಗರಾಜ್ ಎಂಬ ಮಗ ಇದ್ದ ಎಂದರೆ ಸರಿ. ಅವರು ಮರಣ ಹೊಂದಿರುತ್ತಾರೆ ಎಂದರೆ ಸರಿ. ಅವರು 3 ವರ್ಷಗಳ ಹಿಂದೆ ಮರಣ ಹೊಂದಿರುತ್ತಾರೆ. ಅವರ ಮರಣ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ.

ನನ್ನ ತಂದೆ ತಾಯಿಗೆ ಸರೋಜಮ್ಮ ಎಂಬ ಮಗಳು ಇದ್ದಳು, ಅವರು ಮರಣ ಹೊಂದಿರುತ್ತಾರೆ. ಅವರ ವಾರಸುದಾರರನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸಾಕ್ಷಿಯು ಅವರಿಗೆ ಯಾರೂ ವಾರಸುದಾರರು ಇರುವುದಿಲ್ಲ ಎಂದು ನುಡಿಯುತ್ತಾರೆ. ಅವರಿಗೆ ಯಾರೂ ವಾರಸುದಾರರು ಇರುವುದಿಲ್ಲ ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲೆ ಹಾಜರುಪಡಿಸಿರುವುದಿಲ್ಲ. ಮೃತ ಸರೋಜಮ್ಮ ರವರ ಮರಣ ಪ್ರಮಾಣಪತ್ರವನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ನಿಪಿ-1 ರ ವಂಶವೃಕ್ಷಕ್ಕೆ ನಾನೇ ಮಾಹಿತಿ ನೀಡಿ ಬರೆಯಿಸಿರುತ್ತೇನೆ ಎಂದರೆ ಸರಿ. ನಾನು ತಾಲ್ಲೂಕು ಕಛೇರಿಯಿಂದ ವಂಶವೃಕ್ಷ ಧೃಡೀಕರಣ ಪತ್ರ ಪಡೆದಿರುವುದಿಲ್ಲ ಎಂದರೆ ಸರಿ. ಕರ್ಪುಮ್ಮ ರವರಿಗೆ ಯಾವ ರೀತಿ ಆಸ್ತಿ ಬಂತು ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲೆ ಹಾಜರುಪಡಿಸಿರುತ್ತೇನೆ. ನಾನು ಕರ್ಪುಮ್ಮ ರವರಿಗೆ ಆಸ್ತಿ ಯಾವ ರೀತಿ ಬಂತು ಎಂದು ತೋರಿಸಲು ದಾಖಲೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಮನೆಯ ವ್ಯವಹಾರವನ್ನು 6 ನೇ ಪ್ರತಿವಾದಿ ನೋಡಿಕೊಳ್ಳುತ್ತಿದ್ದ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ನನಗೆ ವಿದ್ಯಾಭ್ಯಾಸ ನನ್ನ ಪಾಲನೆಯನ್ನು ನನ್ನ ಸಹೋದರ ನಾಗರಾಜ್ ಮಾಡಿದ್ದಾರೆ ಎಂದರೆ ಸರಿಯಲ್ಲ. ನನ್ನ ಮದುವೆಯನ್ನು ನನ್ನ ಅಣ್ಣ ನಾಗರಾಜ್ ಮಾಡಿದ್ದಾರೆ ಎಂದರೆ ಸರಿಯಲ್ಲ. ನನ್ನ ಮದುವೆಯನ್ನು ನನ್ನ ಅಣ್ಣ ನಾಗರಾಜ್ ರವರು ಖರ್ಚು ಮಾಡಿ

ಅದ್ದೂರಿಯಾಗಿ ನೆರವೇರಿಸಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ವಿಸ್ತೀರ್ಣ 20 x 30 ಅಡಿ ವಿಸ್ತೀರ್ಣ ಮಾತ್ರ ಇರುತ್ತದೆ ಎಂದರೆ ಸರಿಯಲ್ಲ. ನನ್ನ ವಾದ ಪತ್ರದಲ್ಲಿ ಹೇಳಿದಂತೆ 20 x 70 ಅಡಿ ಆಸ್ತಿ ಇಲ್ಲಾ ಎಂದರೆ ಸರಿಯಲ್ಲ. ನಮ್ಮ ಕುಟುಂಬಕ್ಕೆ ಚರ ಮತ್ತು ಸ್ಥಿರ ಆಸ್ತಿಗಳು ಇರಲಿಲ್ಲ ಎಂದರೆ ಸರಿಯಲ್ಲ. ನನ್ನ ಅಣ್ಣ ಮೃತ ನಾಗರಾಜ್ ರವರು ಕೂಲಿ ಕೆಲಸ ಮಾಡುತ್ತಿದ್ದರು. ನಮ್ಮ ಕುಟುಂಬಕ್ಕೆ ಆದಾಯ ಬರುವ ಆಸ್ತಿ ಇರಲಿಲ್ಲ ಎಂದರೆ ಸರಿ. ನನ್ನ ತಂದೆ ತಾಯಿಯನ್ನು ನನ್ನ ಅಣ್ಣ ನಾಗರಾಜ್ ರವರೇ ಸಾಕುತ್ತಿದ್ದರು ಎಂದರೆ ಸರಿಯಲ್ಲ. ನನ್ನ ಅಜ್ಜಿ ಕರ್ಪುಮ್ಮರವರು ದಿಃ 24.11.1989 ರಲ್ಲೇ ಮರಣ ಹೊಂದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಕಣ್ಣಮ್ಮ ರವರು ದಿಃ 20.09.1993 ರಂದು ಮರಣ ಹೊಂದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯನ್ನು ಯಾವ ಸಾಲಿನಲ್ಲಿ ಖರೀದಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ದಾವಾ ಆಸ್ತಿಯನ್ನು ಖರೀದಿ ಮಾಡಿರುವ ಬಗ್ಗೆ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ದಾವೆ ಸಲ್ಲಿಸುವ ಸಮಯದಲ್ಲಿ ದಾವಾ ಆಸ್ತಿ ಯಾರ ಹೆಸರಿನಲ್ಲಿದೆ ಎಂದು ತೋರಿಸುವ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಿಪಿ-2 ರ ದಾಖಲೆಯು 1994-95 ನೇ ಸಾಲಿನ ದಾಖಲೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು ವಾಸಕ್ಕೆ ಯೋಗ್ಯವಲ್ಲ ಎಂದರೆ ಸಾಕ್ಷಿ ಅಲ್ಲಿ ನಿವೇಶನ ಇರುತ್ತದೆ ಎಂದು ನುಡಿಯುತ್ತಾರೆ.

ನನ್ನ ಮದುವೆಯನ್ನು ಕಡೂರಿಗೆ ಮಾಡಿರುತ್ತಾರೆ. ನಾನು ಸುಮಾರು 20 ವರ್ಷಗಳಿಂದ ಹೊಸದುರ್ಗದ ಜಾನ್‌ಕಲ್ ನಲ್ಲಿ ವಾಸವಾಗಿರುತ್ತೇನೆ. 1 ನೇ ಪ್ರತಿವಾದಿಯು ಕೊಪ್ಪಳ ಜಿಲ್ಲೆಯಲ್ಲಿ ವಾಸವಾಗಿರುತ್ತಾರೆ ಎಂದರೆ ಸರಿ. 5 ನೇ ಪ್ರತಿವಾದಿಯು ಜಾನ್‌ಕಲ್ ನಲ್ಲಿ ವಾಸವಾಗಿರುತ್ತಾರೆ ಎಂದರೆ ಸರಿ. 6 ನೇ ಪ್ರತಿವಾದಿಯು ದಾವಣಗೆರೆ ಜಿಲ್ಲೆಯಲ್ಲಿ ವಾಸವಾಗಿದ್ದರು ಎಂದರೆ ಸರಿ. 7 ನೇ ಪ್ರತಿವಾದಿ ಮಂಡ್ಯ ತಾಲ್ಲೂಕು ನಾಗಮಂಗಲದಲ್ಲಿ ವಾಸವಾಗಿರುತ್ತಾರೆ ಎಂದರೆ ಸರಿ. ನನ್ನ ಮತ್ತು ಸಹೋದರಿಯರ ಮದುವೆಯನ್ನು ನಾಗರಾಜ್ ರವರು ಹಣ ಖರ್ಚು ಮಾಡಿ ಮಾಡಿರುತ್ತಾರೆ ಎಂದರೆ ಸರಿಯಲ್ಲ.

<u>( ಮುಂದುವರೆದ ಪಾಟೀ ಸವಾಲಿಗಾಗಿ ಸಮಯಕೋರಿದ್ದರಿಂದ ಮುಂದೂಡಲಾಯಿತು )</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.